<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ</u>

<u>ಸಿ.ಸಿ.ನಂ.769/2015</u>

ಫಿರ್ಯಾದಿಃ ಕರ್ನಾಟಕ ಸರ್ಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿಃ ರಾಹುಲ್ ತಂದೆ ಶಂಕರ ಕುಂದರ,
ವಃ 20 ವರ್ಷ, ಉಃ ಕೂಲಿ ಕೆಲಸ,
ಸಾಃ ಸೇಡಂ, ತಾಃ ಸೇಡಂ.

-----

<u>ಆ ಪಾ ದ ನೆ</u>

ಅಭಿಯೋಜನೆಯವರು ನಿನ್ನ ಮೇಲೆ ಹೊರಿಸಿರುವ ಆರೋಪವೇನೆಂದರೆ, ದಿನಾಂಕ 20-09-2015 ರಂದು ರಾತ್ರಿ 9.00 ಗಂಟೆ ಸುಮಾರಿಗೆ ಸೇಡಂ ಪೊಲೀಸ್ ಠಾಣಾ ವ್ಯಾಪ್ತಿಯ ಸೇಡಂ-ಕೊಡಂಗಲ್ ಮುಖ್ಯ ರಸ್ತೆಯ ವಾಸವದತ್ತಾ ಸಿಮೆಂಟ್ ಕಾರ್ಖಾನೆ ಹತ್ತಿರದ ಆಕಾಶ ಧಾಬಾದ ಎದುರಿನ ರಸ್ತೆಯ ಮೇಲೆ ನೀನು ನಿನ್ನ ವಶದಲ್ಲಿದ್ದ ಮೋಟಾರ್ ಸೈಕಲ್ ನಂ.ಕೆಎ-34/ಬಿ-4108 ನೇದ್ದನ್ನು ಸಾರ್ವಜನಿಕ ರಸ್ತೆಯ ಮೇಲೆ ಮಾನವನ ಜೀವಕ್ಕೆ ಹಾನಿಯಾಗುವ ರೀತಿಯಲ್ಲಿ ಅತಿವೇಗ ಹಾಗೂ ನಿಷ್ಕಾಳಜಿತನದಿಂದ ಚಲಾಯಿಸಿದ್ದು, ಕಾರಣ ನೀನು ಭಾ.ದಂ.ಸಂ. ಕಲಂ. 279 ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೇಲೆ ಹೇಳಿರುವ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ನೀನು ನಿನ್ನ ವಶದಲ್ಲಿದ್ದ ಮೋಟಾರ್ ಸೈಕಲ್ ನಂ.ಕೆಎ-34/ಬಿ-4108 ನೇದ್ದನ್ನು ಸಾರ್ವಜನಿಕ ರಸ್ತೆಯ ಮೇಲೆ ಅತಿವೇಗವಾಗಿ ಚಲಾಯಿಸಿಕೊಂಡು ಹೋಗಿ ರಸ್ತೆ ದಾಟುತ್ತಿದ್ದ ಅಭಿಲಾಶ ಈತನಿಗೆ ಡಿಕ್ಕಿ ಪಡಿಸಿದ್ದರಿಂದ ಅಭಿಲಾಶನಿಗೆ ತಲೆಯ ಎಡ ಭಾಗದಲ್ಲಿ ಭಾರೀ ರಕ್ತಗಾಯಗಳಾಗಿದ್ದು, ಉಪಚಾರ ಕುರಿತು ಕಲಬುರಗಿ ಆಸ್ಪತ್ರೆಗೆ ತೆಗೆದುಕೊಂಡು ಹೋಗುತ್ತಿದ್ದಾಗ, ದಾರಿ ಮಧ್ಯೆ ಮೃತಪಟ್ಟಿದ್ದು, ಕಾರಣ ನೀನು ಭಾ.ದಂ.ಸಂ. ಕಲಂ 304(ಎ) ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೇಲೆ ಹೇಳಿರುವ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ 1 ನೇ ಆರೋಪಿತನಾದ ನೀನು ಅಪಘಾತ ಪಡಿಸಿದ ನಂತರ ಗಾಯಾಳುಗಳಿಗೆ ಪ್ರಥಮ ಚಿಕಿತ್ಸೆ ಕೊಡಿಸದೆ ಘಟನಾ ಸ್ಥಳದಲ್ಲಿಯೇ ಬಿಟ್ಟು ಓಡಿಹೋಗಿದ್ದು, ಕಾರಣ ನೀನು ಮೋಟಾರು ವಾಹನ ಕಾಯ್ದೆ ಕಲಂ 187 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

(ಆರೋಪಣೆಯನ್ನು ಆರೋಪಿತನಿಗೆ ಗೊತ್ತಿದ್ದ ಭಾಷೆಯಲ್ಲಿ ಓದಿ ಹೇಳಿ ತಿಳಿಸಿದ ನಂತರ ಅವರ ಹೇಳಿಕೆಯನ್ನು ಪಡೆದು ನಮೂದಿಸಿದ್ದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣಕರಿಸುತ್ತೇನೆ.)

01/04/22

ದಿನಾಂಕ 01-04-2022

ಪ್ರ.ದ.ನ್ಯಾ.ದಂ. ಸೇಡಂ.